# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ:ಶೈವಿ:2020-21:—3179 ದಿನಾಂಕ:27.01.2021

## ಸುತ್ತೋಲೆ

ವಿಷಯ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಾವತಿಸಲು ಒತ್ತಾಯಿಸದಿರುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ:ಇಡಿ:373:ಯುಎನ್ಇ:2020 ದಿನಾಂಕ:29.12.2020
2. ಸರ್ಕಾರದ ಪತ್ರ ಸಂಖ್ಯೆ:ಸಕಇ:168:ಪಕವಿ:2020 ದಿನಾಂಕ:12.11.2020
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:27.01.2021

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (02) ರ ಪತ್ರದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ. ಬೆಂಗಳೂರು ಇವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಮುಂಗಡವಾಗಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕಂಡು ಬಂದಿರುತ್ತದೆ. ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದಿಂದ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಆದರೆ, ಕೆಲವು ತಾಂತ್ರಿಕ ಸಮಸ್ಯೆಗಳ ಕಾರಣಗಳಿಂದ ಕೆಲವು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವುದು ವಿಳಂಬವಾಗುತ್ತಿದೆ.

ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದು ವಿದ್ಯಾರ್ಥಿಗಳ ಭವಿಷ್ಯದ ಮೇಲೆ ದುಷ್ಪರಿಣಾಮವನ್ನುಂಟು ಮಾಡುತ್ತದೆ. ಅಲ್ಲದೇ ವಿದ್ಯಾರ್ಥಿವೇತನವು ಕೆಲವು ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ದಾರಿ ದೀಪವಾಗಿರುತ್ತದೆ. ಅನೇಕ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶುಲ್ಕ ಪಾವತಿಸಲು ಅಸಹಾಯಕರಾಗಿರುತ್ತಾರೆ. ಶಿಕ್ಷಣ ಸಂಸ್ಥೆಗಳ ಈ ಒಂದು ಒತ್ತಾಯದಿಂದ ಶುಲ್ಕ ಪಾವತಿಸಲು ಸಾಧ್ಯವಾಗದೇ ವಿದ್ಯಾರ್ಥಿಗಳು ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸುವ ಸಾಧ್ಯತೆ ಇರುತ್ತದೆ. ವಿಶ್ವವಿದ್ಯಾನಿಲಯದ ಘಟಕ/ಸಂಯೋಜಿತ ಸ್ನಾತಕ/ಸ್ನಾತಕೋತ್ತರ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅವರ ಪ್ರವೇಶಾತಿ ಸಮಯದಲ್ಲಿ ಕಾಲೇಜು ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯಿಸಬಾರದೆಂದು ಸರ್ಕಾರದ ಪತ್ರದಲ್ಲಿ ತಿಳಿಸಲಾಗಿದ್ದು, ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಲು ಉಲ್ಲೇಖ (01) ರ ಸೂಚಿಸಲಾಗಿದೆ.

ತತ್ಸಂಬಂಧ ಉಲ್ಲೇಖ (01) ಮತ್ತು (02) ರ ಸರ್ಕಾರದ ಆದೇಶದ ಪ್ರತಿಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ **www.tumkuruniversity.ac.in** ದಲ್ಲಿ ಪ್ರಕಟಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಸದರಿ ಆದೇಶಗಳನ್ವಯ ಅಗತ್ಯ ಕ್ರಮವಹಿಸುವಂತೆ ಈ ಮೂಲಕ ತಮಗೆ ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಪ್ರಾಂಶುಪಾಲರು, ಘಟಕ ಹಾಗೂ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತು.ವಿ.ತು
2. ಮುಖ್ಯಸ್ಥರು/ಸಂಯೋಜಕರು, ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ವಿಭಾಗಗಳು, ತು.ವಿ.ತು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.-ಸರ್ಕಾರದ ಆದೇಶ ಹಾಗೂ ಸುತ್ತೋಲೆಯನ್ನು ವಿಶ್ವವದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.
3. ಕಚೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 373 ಯುಎನ್ಇ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 29-12-2020.

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು - 560 001.

ಇವರಿಗೆ:

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು - 560 056.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು - 570 005.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ - 580 003.
4. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ - 577 451.
5. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ - 585 106
6. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು - 560 056.
7. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು - 572 101.
8. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ - 583 276.
9. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು - 570 006.
10. ಕುಲಸಚಿವರು, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ - 586 101.
11. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ..
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
14. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ..
15. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು - 560 018.
16. ಕುಲಸಚಿವರು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
17. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
18. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.
19. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ತಮಕಾ, ಕೋಲಾರ ಜಿಲ್ಲೆ.
20. ಕುಲಸಚಿವರು, ರಾಯಚೂರು ವಿಶ್ವವಿದ್ಯಾನಿಲಯ, ರಾಯಚೂರು.
21. ಕುಲಸಚಿವರು, ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು.
22. ಕುಲಸಚಿವರು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು
23. ಕುಲಸಚಿವರು, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ.

05.01.2021

ಮಾನ್ಯರೆ,

ವಿಷಯ: ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಂತೆ ಸುತ್ತೋಲೆ ಹೊರಡಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಇವರ ದಿನಾಂಕ: 12-11-2020ರ ಸುತ್ತೋಲೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಮಾಜ ಕಲ್ಯಾಣ ಇಲಾಖೆಯು ಹೊರಡಿಸಿರುವ ಉಲ್ಲೇಖಿತ ಸುತ್ತೋಲೆಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ. ಸದರಿ ಸುತ್ತೋಲೆಯಲ್ಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

7/1/2021

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,

ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 168 ಪಕವಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 12-11-2020.

ಸುತ್ತೋಲೆ

ವಿಷಯ: ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪ.ಜಾ. ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಶುಲ್ಕಗಳನ್ನು ಪಡೆಯದಂತೆ ಸುತ್ತೋಲೆ ಹೊರಡಿಸುವ ಕುರಿತು.

ಉಲ್ಲೇಖ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕನಿ/ ಇಡಿ-03/ ಸಿಆರ್- 125/2020-21, ದಿನಾಂಕ: 19-08-2020

* * * * * *

ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಮುಂಗಡವಾಗಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕಂಡು ಬಂದಿರುತ್ತದೆ. 2019-20ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶ ಪೋರ್ಟಲ್ ಅಭಿವೃದ್ಧಿ ಪಡಿಸಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ವಿವರಗಳನ್ನು ಶಿಕ್ಷಣ ಇಲಾಖೆಯ SATS ದತ್ತಾಂಶದಿಂದ ಪಡೆಯಲಾಗುತ್ತಿದೆ ಮತ್ತು ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಇ-ದೃಢೀಕರಣ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ವಿದ್ಯಾರ್ಥಿಯ ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಿ DBT ಹಾಗೂ ಖಜಾನೆ-2 ಮೂಲಕ ವಿದ್ಯಾರ್ಥಿಯ ಖಾತೆಗೆ ನೇರವಾಗಿ ವಿದ್ಯಾರ್ಥಿ ವೇತನವನ್ನು ಇ-ಪೋರ್ಟಲ್ ನಲ್ಲಿ ಜಮೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಕೆಲವೊಂದು ತಾಂತ್ರಿಕ ಕಾರಣಗಳಿಂದಾಗಿ ವಿದ್ಯಾರ್ಥಿವೇತನ ನೀಡುವಲ್ಲಿ ವಿಳಂಬವಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಕೆಲವು ಖಾಸಗಿ ಕಾಲೇಜು/ವಿಶ್ವವಿದ್ಯಾಲಯಗಳು ಹಾಗೂ ಶಿಕ್ಷಣ ಸಂಸ್ಥೆಗಳು ಅರ್ಹರಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದು ಕಂಡು ಬಂದಿದ್ದು, ಇದರಿಂದ ಶೈಕ್ಷಣಿಕ ಚಟುವಟಿಗಳಿಗೆ ಅನಾನುಕೂಲವಾಗಿರುತ್ತದೆ.

ಮುಂದುವರೆದು, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಹರಿರುವ ಎಲ್ಲಾ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡುತ್ತಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ/ಡೀಮ್ಡ್ ವಿಶ್ವವಿದ್ಯಾಲಯ/ಖಾಸಗಿ ವಿಶ್ವವಿದ್ಯಾಲಯ, ಸರ್ಕಾರಿ /ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಸಮಯದಲ್ಲಿ ಕಾಲೇಜು ಶುಲ್ಕಗಳನ್ನು ಪಡೆಯದಂತೆ ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನವನ್ನು ನೀಡುವುದು ಸೂಕ್ತವೆಂದು ಸರ್ಕಾರವು ಮನಗಂಡಿರುತ್ತದೆ.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದಿಂದ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಆದರೆ, ಕೆಲವು ತಾಂತ್ರಿಕ ಸಮಸ್ಯೆಗಳ ಕಾರಣಗಳಿಂದ, ಕೆಲವು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವುದು ವಿಳಂಬವಾಗುತ್ತಿದೆ. ಈ ಸಂದರ್ಭದಲ್ಲಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳನ್ನು ಶುಲ್ಕ ಪಾವತಿಸುವಂತೆ ಒತ್ತಾಯಿಸುತ್ತಿರುವುದು ವಿದ್ಯಾರ್ಥಿಗಳ ಭವಿಷ್ಯದ ಮೇಲೆ ದುಷ್ಪರಿಣಾಮವನ್ನುಂಟು ಮಾಡುತ್ತದೆ. ಅಲ್ಲದೇ ವಿದ್ಯಾರ್ಥಿವೇತನವು ಕೆಲವು ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ದಾರಿ ದೀಪವಾಗಿರುತ್ತದೆ. ಅನೇಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶುಲ್ಕ ಪಾವತಿಸಲು ಅಸಹಾಯಕರಾಗಿರುತ್ತಾರೆ. ಶಿಕ್ಷಣ ಸಂಸ್ಥೆಗಳ ಈ ಒಂದು ಒತ್ತಾಯದಿಂದ ಶುಲ್ಕ ಪಾವತಿಸಲು ಸಾಧ್ಯವಾಗದೇ ವಿದ್ಯಾರ್ಥಿಗಳು ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸುವ ಸಾಧ್ಯತೆ ಇರುತ್ತದೆ. ಆದುದರಿಂದ, ರಾಜ್ಯದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ/ಡೀಮ್ಡ್ ವಿಶ್ವವಿದ್ಯಾಲಯ/ಖಾಸಗಿ ವಿಶ್ವವಿದ್ಯಾಲಯ, ಸರ್ಕಾರಿ /ಅನುದಾನಿತ/ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಅವರ ಪ್ರವೇಶಾತಿ ಸಮಯದಲ್ಲಿ ಕಾಲೇಜು ಶುಲ್ಕಗಳನ್ನು ಪಾವತಿಸುವಂತೆ ಒತ್ತಾಯಿಸಬಾರದೆಂದು ಈ ಮೂಲಕ ಸೂಚನೆ ನೀಡಲಾಗಿದೆ.

(ಡಾ|| ನಾಗಾಂಬಿಕಾ ದೇವಿ)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ)(ಲೆಕ್ಕಪರಿಶೋಧನೆ-2 & 2), ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
4. ಎಲ್ಲಾ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ (ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಇವರ ಮುಖಾಂತರ)
5. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
6. ಎಲ್ಲಾ ಜಿಲ್ಲಾಧಿಕಾರಿಗಳಿಗೆ
7. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ.
8. ಸಂಬಂಧಿಸಿದ ಜಂಟಿ/ಉಪ ನಿರ್ದೇಶಕರುಗಳು, ಸಮಾಜ ಕಲ್ಯಾಣ ಇಲಾಖೆ/
9. ಸಂಬಂಧಪಟ್ಟ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ (ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಇವರ ಮುಖಾಂತರ)
10. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು

ಪ್ರತಿಗಳು:-

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು.

*****